

# SSLC Hot Questions for High Marks!

Final Revision for SSLC Exam

Series 2

*Presented by*

**Kaviraj Jidage**

1. ರಾಮನ ಸ್ವಾಗತಕ್ಕಾಗಿ ಶಬರಿ ಮಾಡಿಕೊಂಡಿದ್ದ ಸಿದ್ಧತೆಗಳೇನು?

ಉತ್ತರ: ರಾಮನ ಸ್ವಾಗತಕ್ಕಾಗಿ ಶಬರಿ ಕಡುಸವಿಯಾದ ಬಗೆಬಗೆಯ ಹಣ್ಣು – ಹಂಪಲುಗಳನ್ನು, ಜೇನುತುಪ್ಪ ಅಧಿಕವಾಗಿರುವ ಮಧುಪರ್ಕವೆಂಬ ಪಾನೀಯವನ್ನು, ಸುವಾಸನೆಯಿಂದ ಕೂಡಿದ ಹೂವುಗಳನ್ನು ಸಂಗ್ರಹಿಸಿ ಸಿದ್ಧತೆಮಾಡಿಕೊಂಡಿದ್ದಳು.

2. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ ?

ಉತ್ತರ: ಲಂಡನ್ನಿನ ಹೆಣ್ಣು ಮಕ್ಕಳು ಉಪಹಾರಗಳಲ್ಲಿ, ದೊಡ್ಡ ದೊಡ್ಡ ಅಂಗಡಿಗಳಲ್ಲಿ ಟೈಪಿಸ್ಟ್ ಆಗಿ ಹಾಗೂ ಸಿನಿಮಾ ಗೃಹದಲ್ಲಿ ಪ್ರೇಕ್ಷಕರಿಗೆ ಜಾಗವನ್ನು ಹುಡುಕಿಕೊಡುವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ.

3. ಗುರೂಪದೇಶದ ಗುಣಗಳನ್ನು ಪಟ್ಟಿಮಾಡಿ.

ಉತ್ತರ: ಗುರೂಪದೇಶ ಎಂದರೆ ಜನರ ಒಳ ಹೊರಗಣ ಕೊಳೆಗಳನ್ನು ತೊಳೆದು ಬಿಡುವ ನೀರಿಲ್ಲದ ಸ್ನಾನ, ತಲೆ ನೆರೆಯದ, ಮೈಸುಕ್ಕುಗಟ್ಟದೆ ಮೂಡುವ ಮುಪ್ಪು. ಬೊಜ್ಜು ಬೆಳೆಯದೆ ಬರುವ ಗುರುತ್ವ. ಬಂಗಾರವಿಲ್ಲದೆ ಮಾಡಿ ಬೆಲೆಬಾಳುವ ಕಿವಿಯೋಲೆ. ಪಂಜು ಇಲ್ಲದೆ ಬೆಳಗುವ ಬೆಳಕು.

Kaviraj Jidage

4. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಏನೆಂದು ಹೇಳಿದ್ದಾರೆ ?

ಉತ್ತರ: ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು "ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರ, ಶಿಕ್ಷಣವು ಸಂಜೀವಿನಿ, ಶಿಕ್ಷಣಕ್ಕಾಗಿಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು"ಎಂದು ಹೇಳಿದ್ದಾರೆ.

5. ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕಬೇಕು?

ಉತ್ತರ: ನಾಳಿನ ಕನಸನ್ನು ಬಿತ್ತಬೇಕಾದರೆ ಮತಪಂಥಗಳೆಲ್ಲವೂ ನಮ್ಮ ಉತ್ತಮ ಜೀವನಕ್ಕೆ ಬೆಳಕಾಗಬಲ್ಲ, ಮುಕ್ತಿಯನ್ನು ನೀಡಬಲ್ಲ, ಸನ್ಮಾನಕ್ಕೆ ಕರೆದುಕೊಂಡು ಹೋಗುವ ಮಾರ್ಗಗಳೆಂದು ತಿಳಿದು ಎಚರಿಚ ಕೆಯಲ್ಲಿ ನಾವು ಬದುಕಬೇಕು. ¨ಭಯ ಮತ್ತು ಸಂಶಯಗಳಿಂದ ಮಸುಕಾಗಿರುವಮನದ ಕಣ್ಣಿನಲ್ಲಿ ಭವಿಷ್ಯದ, ಕನಸ್ಸನ್ನು ಬಿತ್ತುತ್ತ ಬದುಕು ನಡೆಸಬೇಕು.

6. ಹಕ್ಕಿಯು ಯಾವ ಮೇರೆ ಮೀರಿ, ನೀರನು ಹೀರಿದೆ?

ಉತ್ತರ: ಕಾಲದ ಹಕ್ಕಿಯು, ಬೆಳ್ಳಿಚುಕ್ಕಿ ಎಂದು ಕರೆಯಲ್ಪಡುವ ಶುಕ್ರಗ್ರಹವೆಂಬ ಹಳ್ಳಿಯ ಮೇರೆಯನ್ನು ಮೀರಿ ಹಾರಿಹೋಗುತ್ತಿದೆ. ತಿಂಗಳೂರು ಅಂದರೆ ಚಂದ್ರಲೋಕ. ಈ ಚಂದ್ರಲೋಕಕ್ಕೆ ಹಕ್ಕಿ ಏರಿ ನೀರಿನ ಸೆಲೆಯನ್ನು ಹುಡುಕಿ ಅದನ್ನು ಹೀರುತ್ತ ಸಂತೋಷವಾಗಿ ಆಡುತ್ತಿದೆ. ಹೆಚ್ಚುವರಿ ಪ್ರಶ್ನೋತ್ತರಗಳು

Kaviraj Jidage

7. ಹಲಗಲಿ ಏಕೆ ಹಾಳಾಗಿ ಹೋಯಿತು ?

ಉತ್ತರ: ಬ್ರಿಟೀಷರ ದಂಡು ಹಲಗಲಿಗೆ ಮುತ್ತಿಗೆ ಹಾಕಿ ಬೇಡರನ್ನು ಬಗ್ಗು ಬಡಿದು ಕೊಡಲಿ, ಕುಡಗೋಲು , ಕುಡ, ಕಬ್ಬಿಣ, ಮೊಸರು ,ಬೆಣ್ಣೆ, ಹಾಲು, ಉಪ್ಪು,ಎಣ್ಣೆ ,ಅರಿಸಿಣ, ಜೀರಗಿ , ಅಕ್ಕಿ, ಸಕ್ಕರೆ ಬೆಲ್ಲ, ಗಂಗಳ, ತಂಬಿಗೆ, ಮಂಗಳಸೂತ್ರ , ಬೀಸುವಕಲ್ಲು –ಹೀಗೆಹೀಗೆ ಸಿಕ್ಕಿದ್ದೆಲ್ಲಾ ತೆಗೆದುಕೊಂಡು, ಊರಿಗೆಕೊಳ್ಳಿ ಇಟ್ಟು ಸುಟ್ಟು ಬೂದಿ ಮಾಡಿ ಗುರುತು ಉಳಿಯದಂತೆ ಮಾಡಿ ಹೋಗಿದ್ದರಿಂದ ಹಾಳಾಗಿ ಹೋಯಿತು.

8. ವಿವೇಕಾನಂದರ ದೃಷ್ಟಿಯಲ್ಲಿ ದೇಶದ ಪ್ರಗತಿ ಸ್ಥಿರವಾಗುವುದು ಯಾವಾಗ ?

ಉತ್ತರ: ದೇಶದ ಭಾಷೆಯಲ್ಲಿ ಜನರಿಗೆ ಭಾವನೆಗಳನ್ನು ನೀಡಿದರೆ ಅವರು ವಿಷಯ ಗ್ರಹಣ ಮಾಡಿಕೊಳ್ಳಬಲ್ಲರು. ಆದರೆ ಅವರಿಗೆ ಸಂಸ್ಕೃತಿಯ ಅವಶ್ಯಕತೆ ಇದೆ. ಅವರಿಗೆ ಅದನ್ನು ಕೊಡುವ ತನಕ ಅವರ ಪ್ರಗತಿ ಸ್ಥಿರವಾಗಲಾರದು. ಸಂಸ್ಕೃತಿ ಮಾತ್ರ ಆಘಾತವನ್ನು ಸಹಿಸಬಲ್ಲದು. ಕೇವಲ ಜ್ಞಾನ ರಾಶಿಗೆ ಅದನ್ನು ಎದುರಿಸುವ ಶಕ್ತಿ ಇಲ್ಲ. ಜಗತ್ತಿನ ಜ್ಞಾನರಾಶಿಯನ್ನೆ ಕೊಡಬಹುದು. ಅದರೆ ಅದರಿಂದ ಹೆಚ್ಚು ಪ್ರಯೋಜನವಿಲ್ಲ. ಸಂಸ್ಕೃತಿಯನ್ನು ಹೊಂದಿರುವ ಜನರಿಂದ ದೇಶದ ಪ್ರಗತಿ ಸಾಧ್ಯ.

Kaviraj Jidage

9. ನಾರಾಯಣಗುರು ಧರ್ಮಪರಿಪಾಲನಾ ಯೋಗಂ ಸಂಘಟನೆಯ ಕೊಡುಗೆಗಳನ್ನು ತಿಳಿಸಿ.

ಉತ್ತರ: ಧರ್ಮಪರಿಪಾಲನಾ ಯೋಗಂ ಸಂಘಟನೆಯ ಪ್ರಮುಖ ಉದ್ದೇಶವೆಂದರೆ ಹಿಂದುಳಿದ ಮತ್ತು ಶೋಷಣೆಗೊಳಗಾದ ಸಮುದಾಯಗಳ ಸಬಲೀಕರಣವಾಗಿತ್ತು. ಇದನ್ನು ಸಾಧಿಸಲು ಶಿಕ್ಷಣವೇ ಮಾರ್ಗವೆಂದು ಸಾರಿದರು.

10. ಭಗತ್ ಸಿಂಗ್ ಮತ್ತು ಆತನ ಸಹಚರರಿಗೆ ಗಲ್ಲುಶಿಕ್ಷೆಯಾಗಲು ಕಾರಣವೇನು ?

ಉತ್ತರ: ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ಮರಣ ದಂಡನೆಗೆ ಈಡಾದನು.

Kaviraj Jidage

# Thank you all

Subscribe now